# ಕರ್ನಾಟಕ ಸರ್ಕಾರ

ಸಂಖ್ಯೆ: ಆಕುಕ 322 ಅಮುಕಾ 2020

ಕರ್ನಾಟಕ ಸರ್ಕಾರ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು, ದಿನಾಂಕ: 27.08.2020

## ಸುತ್ತೋಲೆ

ರಾಜ್ಯದಲ್ಲಿ ಕೋವಿಡ್-19 ಸೋಂಕಿನಿಂದ ಮರಣ ಹೊಂದುತ್ತಿರುವವರ ಪ್ರಮಾಣ ಕಡಿಮೆ ಮಾಡುವ ಸಲುವಾಗಿ ಕೋವಿಡ್ ಪರೀಕ್ಷೆಗಳ ಪ್ರಮಾಣವನ್ನು ಹೆಚ್ಚಾಗಿ ನಡೆಸಲಾಗುತ್ತಿದೆ. ಸೋಂಕಿತರನ್ನು ಗುರುತಿಸಿ, ಪ್ರತ್ಯೇಕವಾಗಿ ಇರಿಸುವುದರಿಂದ ಸೋಂಕನ್ನು ತಡೆಗಟ್ಟುವ ಸಾಧ್ಯತೆ ಇರುತ್ತದೆ. ಭಾರತ ಸರ್ಕಾರದ ಆದೇಶದಂತೆ ಮರಣ ಪ್ರಮಾಣ ಶೇಕಡ 1 ಕ್ಕಿಂತ ಕಡಿಮೆ ಮಾಡುವ ನಿಟ್ಟಿನಲ್ಲಿ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಬೇಕಾಗಿರುತ್ತದೆ :

(1) ರೋಗ ಲಕ್ಷಣವಿರುವವರನ್ನು ಕೂಡಲೇ ಪರೀಕ್ಷಿಸಿ ಸೂಕ್ತ ಚಿಕಿತ್ಸೆ ನೀಡಿ ಅಗತ್ಯವಿದ್ದಲ್ಲಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡುವುದು.

(2) ಪ್ರತೀ ವಾರ ಕೋವಿಡ್ ಸೋಂಕಿನಿಂದ ಮರಣ ಹೊಂದಿದವರ ಸಮೀಕ್ಷೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳುವುದು. ಇದನ್ನು ಜಿಲ್ಲಾ ಶಸ್ತ್ರಚಿಕಿತ್ಸಕರು / ವೈದ್ಯಕೀಯ ಅಧೀಕ್ಷಕರು ಮತ್ತು ತಜ್ಞರ ಸಮಿತಿಯು ನಿರ್ವಹಿಸುವುದು. ದುರ್ಬಲ ವ್ಯಕ್ತಿಗಳಲ್ಲಿ ಮರಣ ಪ್ರಮಾಣವನ್ನು ಗುರುತಿಸುವುದು (ಮರಣ ಪ್ರಮಾಣ ಶೇಕಡಾವಾರು).

(3) ದುರ್ಬಲ ವ್ಯಕ್ತಿಗಳ (60 ವರ್ಷಕ್ಕಿಂತ ಮೇಲ್ಪಟ್ಟವರು, ಮಧುಮೇಹ, ರಕ್ತದೊತ್ತಡ, ಕ್ಯಾನ್ಸರ್ ಇತ್ಯಾದಿ) ತಪಾಸಣೆ ಹಾಗೂ ಚಿಕಿತ್ಸೆಯನ್ನು ಕಟ್ಟುನಿಟ್ಟಾಗಿ ಮಾರ್ಗಸೂಚಿಗಳನ್ವಯ ಅನುಸರಿಸುವುದು.

(4) ಆರೋಗ್ಯ ಕಾರ್ಯಕರ್ತರುಗಳಿಗೆ ನಿಯಮಿತವಾಗಿ ಕೋವಿಡ್ ಪರೀಕ್ಷೆಯನ್ನು ನಡೆಸಿ, ಸೋಂಕು ತಗಲದಂತೆ ಅಗತ್ಯವಿರುವ ಕ್ರಮಗಳನ್ನು ತೆಗೆದುಕೊಳ್ಳುವುದು (ಅಗತ್ಯವಿರುವ ಪಿ.ಪಿ.ಇ ಬಳಕೆ, ಡಾಫಿಂಗ್ ಮತ್ತು ಡಾನಿಂಗ್ ತರಬೇತಿ).

(5) ತೀವ್ರ ನಿಗಾ ಘಟಕದಲ್ಲಿರುವ ಕೋವಿಡ್ ರೋಗಿಗಳ ಚಿಕಿತ್ಸೆಯನ್ನು ಟೆಲಿ-ಐಸಿಯು ಮುಖಾಂತರ ಮಾರ್ಗದರ್ಶನ ಪಡೆದುಕೊಂಡು ಖಚಿತಪಡಿಸಿಕೊಳ್ಳುವುದು.

(6) ಪ್ರತಿದಿನವೂ ಕೋವಿಡ್ ಆಸ್ಪತ್ರೆಗಳಲ್ಲಿ ಆಮ್ಲಜನಕ, ಐಸಿಯು, ಔಷಧಿಗಳು, ಪಿ.ಪಿ.ಇ ಕಿಟ್, ಮಾಸ್ಕ್ ಮತ್ತು ಇತರೆ ಸಲಕರಣೆಗಳ ಕೊರತೆಯಾಗದಂತೆ ಗಮನಹರಿಸುವುದು.

ವೈದ್ಯಕೀಯ ಕಾಲೇಜು ಆಸ್ಪತ್ರೆಗಳಿಗೆ ಸಂಬಂಧಪಟ್ಟಂತೆ ವೈದ್ಯಕೀಯ ಅಧೀಕ್ಷಕರುಗಳು, ಜಿಲ್ಲಾಸ್ಪತ್ರೆಗಳಿಗೆ ಸಂಬಂಧಿಸಿದಂತೆ ಜಿಲ್ಲಾ ಶಸ್ತ್ರಚಿಕಿತ್ಸಕರು ಹಾಗೂ ತಾಲ್ಲೂಕು ಆಸ್ಪತ್ರೆಗಳಿಗೆ ಸಂಬಂಧಿಸಿದಂತೆ ಆಡಳಿತ ವೈದ್ಯಾಧಿಕಾರಿಗಳಿಗೆ ಮೇಲ್ಕಂಡ ಕ್ರಮಗಳನ್ನು ನಿರ್ವಹಿಸುವ ಜವಾಬ್ದಾರಿಯಿರುತ್ತದೆ.

ಮೇಲ್ಕಂಡ ಅಂಶಗಳ ಬಗ್ಗೆ ತೆಗೆದುಕೊಂಡ ಕ್ರಮಗಳನ್ನು ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರಿಗೆ ಪ್ರತೀ ವಾರವೂ ವರದಿ ಸಲ್ಲಿಸುವುದು.

27/08/20
(ಜಾವೇದ್ ಅಖ್ತರ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು

ಇವರಿಗೆ :

1) ಎಲ್ಲಾ ಜಿಲ್ಲಾ ಶಸ್ತ್ರಚಿಕಿತ್ಸಕರುಗಳು
2) ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು
3) ಎಲ್ಲಾ ಸರ್ಕಾರಿ ವೈದ್ಯಕೀಯ ಕಾಲೇಜುಗಳ ವೈದ್ಯಕೀಯ ಅಧಿಕ್ಷಕರುಗಳು

ಪ್ರತಿ:

4) ಆಯುಕ್ತರು, ಬಿ.ಬಿ.ಎಂ.ಪಿ
5) ಆಯುಕ್ತರು, ಆಕುಕ ಸೇವೆಗಳು
6) ನಿರ್ದೇಶಕರು, ಆಕುಕ ಸೇವೆಗಳು
7) ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ
8) ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ